# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 914
2. ಮಾನ್ಯ ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 17.12.2024
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಉತ್ತರ ಕರ್ನಾಟಕದ ಭಾಗದಲ್ಲಿರುವ ಒಟ್ಟು ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಕ್ಕರೆ ಕಾರ್ಖಾನೆಗಳ ಯಾವುವು; (ವಿವರ ನೀಡುವುದು) | ಕರ್ನಾಟಕದ ಉತ್ತರ ಭಾಗದಲ್ಲಿ ಒಟ್ಟು 76 ನೋಂದಾಯಿತ ಸಕ್ಕರೆ ಕಾರ್ಖಾನೆಗಳಿದ್ದು, ಇವುಗಳ ಪೈಕಿ ಪ್ರಸ್ತುತ 69 ಸಕ್ಕರೆ ಕಾರ್ಖಾನೆಗಳು ಕಾರ್ಯನಿರ್ವಹಿಸುತ್ತಿವೆ. ಉಳಿದ 07 ಸಕ್ಕರೆ ಕಾರ್ಖಾನೆಗಳು ಸ್ಥಗಿತಗೊಂಡಿರುತ್ತವೆ. ವಿವರಗಳನ್ನು **ಅನುಬಂಧ-1 ರಲ್ಲಿ** ಒದಗಿಸಿದೆ. |
| (ಆ) | ರಾಜ್ಯದಲ್ಲಿ ಅತೀ ಹೆಚ್ಚು ಕಬ್ಬು ಬೆಳೆಯುತ್ತಿರುವ ಜಿಲ್ಲೆ ಬೆಳಗಾವಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಹಿಂದಿನ ಸರ್ಕಾರ ಅವಧಿಯಲ್ಲಿ ಸಕ್ಕರೆ ನಿರ್ದೇಶನಾಲಯ ಕಛೇರಿಯನ್ನು ಬೆಳಗಾವಿ ಜಿಲ್ಲೆಗೆ ಸ್ಥಳಾಂತರಿಸಲು ಆದೇಶವಾಗಿದ್ದರೂ ಸ್ಥಳಾಂತರ ಮಾಡದಿರಲು ಕಾರಣಗಳೇನು: ಸ್ಥಳಾಂತರ ಮಾಡಲು ಇರುವ ಅಡಚಣೆಗಳೇನು; | ಬಂದಿದೆ<br>ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: ಪಿಡಿ 75 ಯೋಪರ 2018, ದಿನಾಂಕ:10.01.2019 ರಲ್ಲಿ ಬೆಂಗಳೂರಿನಲ್ಲಿರುವ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಕಚೇರಿಯನ್ನು ಬೆಳಗಾವಿಗೆ ವರ್ಗಾಯಿಸಿ ಆದೇಶಿಸಲಾಗಿತ್ತು. ಅಧಿಸೂಚನೆಯ ಪ್ರತಿಯನ್ನು **ಅನುಬಂಧ-2 ರಲ್ಲಿ** ಒದಗಿಸಿದೆ.<br>ಸರ್ಕಾರದ ಆದೇಶ ಸಂಖ್ಯೆ; ಸಿಐ 77 ಸಿಓಎಫ್ 2019, ದಿನಾಂಕ:30.09.2021ರಲ್ಲಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಕಚೇರಿಯನ್ನು ದಿನಾಂಕ:01.10.2021 ರಿಂದ ಜಾರಿಗೆ ಬರುವಂತೆ ಪೂರ್ಣ ಪ್ರಮಾಣದಲ್ಲಿ ಬೆಂಗಳೂರಿನಿಂದ ಬೆಳಗಾವಿಗೆ ಸ್ಥಳಾಂತರಿಸಲು ಹಾಗೂ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಕಚೇರಿಯನ್ನು ಬೆಳಗಾವಿಯ ಸುವರ್ಣ ಸೌಧಕ್ಕೆ ಪೂರ್ಣ ಪ್ರಮಾಣದಲ್ಲಿ ಸ್ಥಳಾಂತರಿಸುವವರೆಗೆ ಬೆಳಗಾವಿಯಲ್ಲಿರುವ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ ಕಛೇರಿಯಲ್ಲಿ ತಾತ್ಕಾಲಿಕವಾಗಿ ಸಕ್ಕರೆ ನಿರ್ದೇಶನಾಲಯದ ಕಛೇರಿಯನ್ನು ಪ್ರಾರಂಭಿಸಲು ತಿಳಿಸಲಾಗಿತ್ತು.<br>ಅದರಂತೆ ದಿನಾಂಕ:07.10.2021 ರಿಂದ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಕಛೇರಿಯನ್ನು ತಾತ್ಕಾಲಿಕವಾಗಿ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಲ್ಲಿ ಪ್ರಾರಂಭಿಸಲಾಗಿದೆ.<br>ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯಕ್ಕೆ ಮಂಜೂರಾಗಿರುವ ಒಟ್ಟು 39 ಹುದ್ದೆಗಳ ಪೈಕಿ ಕೇವಲ 3 ಜನ ಅಧಿಕಾರಿಗಳು ಹಾಗೂ 6 ಜನ ಸಿಬ್ಬಂದಿಗಳು ಹೀಗೆ ಒಟ್ಟು 9 ಖಾಯಂ ಹುದ್ದೆಗಳು ಮಾತ್ರ ಭರ್ತಿಯಾಗಿರುತ್ತವೆ. ತೀವ್ರತರವಾಗಿ ಅಧಿಕಾರಿ/ಸಿಬ್ಬಂದಿಗಳ ಕೊರತೆಯಿಂದಾಗಿ ಪೂರ್ಣ ಪ್ರಮಾಣದಲ್ಲಿ ಕಛೇರಿಯನ್ನು ಸ್ಥಳಾಂತರಿಸಲು ಸಾಧ್ಯವಾಗಿರುವುದಿಲ್ಲ. |

| | | |
|---|---|---|
| (ಇ) | ಸದರಿ ನಿರ್ದೇಶನಾಲಯವನ್ನು ಯಾವ ಸ್ಥಳದಲ್ಲಿ ಸ್ಥಳಾಂತರಿಸಲು ನಿರ್ಧರಿಸಲಾಗಿದೆ; ಸ್ಥಳ ಪರಿಶೀಲನೆ ಮಾಡಲಾಗಿದೆಯೇ; (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು) | ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ರಾಜ್ಯಮಟ್ಟದ ಕಚೇರಿಯನ್ನು ಬೆಳಗಾವಿಯ ಸುವರ್ಣಸೌಧದ ಕೊಠಡಿ ಸಂಖ್ಯೆ: 204, 204 ಎ, 205, 206 ಮತ್ತು 206 ಎ ಗಳಿಗೆ ಸ್ಥಳಾಂತರ ಮಾಡಲು ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಐ 77 ಸಿಓಎಫ್ 2019, ದಿನಾಂಕ: 20.11.2024ರಲ್ಲಿ ಆದೇಶಿಸಲಾಗಿದೆ. (ಅಧಿಸೂಚನೆಯ ಪ್ರತಿಯನ್ನು **ಅನುಬಂಧ-3 ರಲ್ಲಿ** ಒದಗಿಸಿದೆ) |
| (ಈ) | ಸದರಿ ನಿರ್ದೇಶನಾಲಯವು ಬೆಂಗಳೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವುದರಿಂದ ಸಮಗ್ರ ಉತ್ತರ ಕರ್ನಾಟಕ ಭಾಗದ ಕಬ್ಬು ಬೆಳೆಗಾರರಿಗೆ ಮತ್ತು ಕಾರ್ಖಾನೆ ಮಾಲೀಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸದರಿ ನಿರ್ದೇಶನಾಲಯವನ್ನು ಬೆಳಗಾವಿಗೆ ಸ್ಥಳಾಂತರಿಸಲಾಗುವುದು? (ಮಾಹಿತಿ ನೀಡುವುದು) | ಬಂದಿದೆ.<br><br>ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ ಬೆಳಗಾವಿ ಇವರ ಪರಿಷ್ಕೃತ ಆದೇಶ ಸಂಖ್ಯೆ:ಕಂಶಾ/ಲೋಇ/ವಿವ-5/2020-21, ದಿನಾಂಕ: 20.01.2023ರಲ್ಲಿ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ರಾಜ್ಯಮಟ್ಟದ ಕಚೇರಿಗೆ ಬೆಳಗಾವಿಯ ಸುವರ್ಣಸೌಧದ ಕೊಠಡಿ ಸಂಖ್ಯೆ: 204, 204 ಎ, 205, 206 ಮತ್ತು 206 ಎ ಗಳನ್ನು ಹಂಚಿಕೆ ಮಾಡಲಾಗಿರುತ್ತದೆ. ಅದರಂತೆ, ತಾತ್ಕಾಲಿಕವಾಗಿ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಕೇಂದ್ರ ಕಛೇರಿಯನ್ನು ಬೆಳಗಾವಿಯ ಸುವರ್ಣಸೌಧದ ಕೊಠಡಿ ಸಂಖ್ಯೆ:204, 204, 204-ಎ, 205, 206 ಮತ್ತು 206-ಎ ಗಳಿಗೆ ಸ್ಥಳಾಂತರ ಮಾಡಲು ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಐ 77 ಸಿಓಎಫ್ 2019, ದಿನಾಂಕ: 20.11.2024ರಲ್ಲಿ ಆದೇಶಿಸಲಾಗಿದೆ. |

**ಸಂಖ್ಯೆ:** ಸಿಐ 330 ಎಸ್‌ಜಿಎಫ್ 2024

**(ಶಿವಾನಂದ ಎಸ್ ಪಾಟೀಲ)**
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು

ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ. ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ ಚುನಾಯಿತರಾದವರು) (ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 914ಕ್ಕೆ **ಅನುಬಂಧ-1**

**ಉತ್ತರ ಕರ್ನಾಟಕದಲ್ಲಿರುವ ಸಕ್ಕರೆ ಕಾರ್ಖಾನೆಗಳ ಪಟ್ಟಿ**

| ಕ್ರ. ಸಂ. | ಸಕ್ಕರೆ ಕಾರ್ಖಾನೆಯ ಹೆಸರು |
|---|---|
| | **ಸಹಕಾರಿ ವಲಯ - ಕಾರ್ಯನಿರತ** |
| 1 | ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಮರಗೂರು, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ |
| 2 | ಚಿದಾನಂದ ಬಸಪ್ರಭು ಕೋರೆ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ 591247 |
| 3 | ಘಟಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಸಂಗನಕೇರಿ, ಗೋಕಾಕ ತಾಲ್ಲೂಕು, ಬೆಳಗಾವಿ ಜಿಲ್ಲೆ-591247 |
| 4 | ಹಾಲಸಿದ್ದನಾಥ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ನಿಪ್ಪಾಣಿ ತಾಲ್ಲೂಕು. ಬೆಳಗಾವಿ ಜಿಲ್ಲೆ.591237 |
| 5 | ಹಿರಣ್ಯಕೇಶಿ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಸಂಕೇಶ್ವರ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ.591314 |
| 6 | ಕೃಷ್ಣ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಳಿಯಾಳ, ಅಥಣಿ ತಾಲ್ಲೂಕು, ಬೆಳಗಾವಿ ಜಿಲ್ಲೆ 591304 |
| 7 | ಮಹಾತ್ಮಾ ಗಾಂಧಿ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಿಚಕ್ ಮಠ್, ಭಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ- 585328 |
| 8 | ಮಲಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಎಂ.ಕೆ.ಹುಬ್ಬಳ್ಳಿ ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ 591153 |
| 9 | ಮಾರ್ಕಂಡೇಯ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಕಾಕತಿ, ಬೆಳಗಾವಿ ಜಿಲ್ಲೆ |
| 10 | ನಂದಿ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಕೃಷ್ಣನಗರ, ವಿಜಯಪುರ ತಾಲ್ಲೂಕು& ಜಿಲ್ಲೆ- 587117 |
| 11 | ನಾರಂಜ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಇಮಾಂಪುರ್, ಬೀದರ್ ತಾಲ್ಲೂಕು& ಜಿಲ್ಲೆ- 585403 |
| 12 | ಸಂಗಮ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಿಡಕಲ್ ಡ್ಯಾಂ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ |
| 13 | ಸೋಮೇಶ್ವರ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಸಿದ್ದಸಮುದ್ರ, ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ 591104 |
| | **ಸಹಕಾರಿ ವಲಯ –ಕಾರ್ಯನಿರತ –(ಗುತ್ತಿಗೆ)** |
| 14 | ಜಿಎಂ ಶುಗರ್ ಅಂಡ್ ಎನರ್ಜಿ ಲಿಮಿಟೆಡ್ (ಕರ್ನಾಟಕ ಸಹಕಾರಿ ಸಕ್ಕರೆ ಕಾರ್ಖಾನೆಯ ಗುತ್ತಿಗೆದಾರರು) ಸಂಗೂರು, ಹಾವೇರಿ ತಾಲ್ಲೂಕು& ಜಿಲ್ಲೆ 581110 |
| 15 | ಲೈಲಾ ಶುಗರ್ಸ್ (ಭಾಗ್ಯಲಕ್ಷ್ಮಿ ಸಹಕಾರಿ ಸಕ್ಕರೆ ಕಾರ್ಖಾನೆ ನಿ.) ಕುಪ್ಪಟಗಿರಿ, ಖಾನಾಪುರ ತಾಲ್ಲೂಕು, ಬೆಳಗಾವಿ ಜಿಲ್ಲೆ- 591302 |
| 16 | ಎನ್ಎಸ್ಎಲ್ ಶುಗರ್ಸ್ (ಸಹಕಾರಿ ಸಕ್ಕರೆ ಕಾರ್ಖಾನೆಯ ಗುತ್ತಿಗೆದಾರರು) ಭೂಸನೂರು, ಆಳಂದ ತಾಲ್ಲೂಕು, ಕಲ್ಬುರ್ಗಿ ಜಿಲ್ಲೆ- 585302 |
| 17 | ಇ.ಐ.ಡಿ ಪ್ಯಾರಿ (ಇಂಡಿಯಾ) ಲಿಮಿಟೆಡ್( ಧನಲಕ್ಷ್ಮಿ ಸಹಕಾರಿ ಸಕ್ಕರೆ ಕಾರ್ಖಾನೆಯ ಗುತ್ತಿಗೆದಾರರು) ಖಾನಪೇಟೆ, ರಾಮದುರ್ಗ ತಾಲ್ಲೂಕು, ಬೆಳಗಾವಿ ಜಿಲ್ಲೆ- 591114 |
| 18 | ರೇಣುಕಾ ಶುಗರ್ಸ್(ರಾಯಬಾಗ ಸಹಕಾರಿ ಸಕ್ಕರೆ ಕಾರ್ಖಾನೆ ನಿ.) ಮೇಖಳಿ, ರಾಯಬಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ- 591317 |
| 19 | ವಿಜಯನಗರ ಶುಗರ್ಸ್ (ಮೃಢಗಿರಿ ಸಹಕಾರಿ ಸಕ್ಕರೆ ಕಾರ್ಖಾನೆಯ ಗುತ್ತಿಗೆದಾರರು) ಗಂಗಾಪುರ, ಮುಂಡರಗಿ ತಾಲ್ಲೂಕು, ಗದಗ ಜಿಲ್ಲೆ - 582118 |
| | **ಖಾಸಗಿ ವಲಯ - ಕಾರ್ಯನಿರತ** |
| 20 | ಅಥಣಿ ಫಾರ್ಮರ್ಸ್ ಶುಗರ್ ವರ್ಕ್ಸ್ ಲಿಮಿಟೆಡ್, ವಿಷ್ಣು ಅಣ್ಣಾ ನಗರ, ಅಥಣಿ ತಾಲ್ಲೂಕು, ಬೆಳಗಾವಿ ಜಿಲ್ಲೆ -591234 |
| 21 | ಬಾಲಾಜಿ ಶುಗರ್ಸ್ ಲಿಮಿಟೆಡ್, ಯರಗಲ್, ಮುದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ |
| 22 | ಭಾಲ್ಕೇಶ್ವರ ಶುಗರ್ಸ್ ಲಿಮಿಟೆಡ್, ಬಾಜೋಳಗಾ, ಭಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ |
| 23 | ಬೀದರ್ ಕಿಸಾನ್ ಶಕ್ಕರ್ ಕಾರ್ಖಾನಾ ಲಿ., ಮೊಗದಲ್ ಗ್ರಾಮ, ಬೀದರ್ ತಾಲ್ಲೂಕು & ಜಿಲ್ಲೆ |

| | |
|---|---|
| 24 | ಬೀಳಗಿ ಶುಗರ್ಸ್ ಲಿಮಿಟೆಡ್, ಬಡಗುಂದಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ -587116 |
| 25 | ಬೆಳಗಾಂ ಶುಗರ್ಸ್ ಪ್ರೈ ಲಿಮಿಟೆಡ್, ಹುದಲಿ ಗ್ರಾಮ, ಬೆಳಗಾವಿ ತಾಲ್ಲೂಕು ಮತ್ತು ಜಿಲ್ಲೆ |
| 26 | ಕೋರ್ ಗ್ರೀನ್ ಶುಗರ್ & ಫ್ಯುಯೆಲ್ಸ್ ಪ್ರೈ ಲಿಮಿಟೆಡ್, ತುಮಕೂರು ಗ್ರಾಮ, ಶಹಾಪುರ ತಾಲ್ಲೂಕು, ಯಾದಗಿರಿ ಜಿಲ್ಲೆ-585355 |
| 27 | ಇ.ಐ.ಡಿ. ಪ್ಯಾರಿ (ಇಂಡಿಯಾ) ಲಿಮಿಟೆಡ್, ನಾಗರಾಳ, ಬಾಗಲಕೋಟೆ ಜಿಲ್ಲೆ |
| 28 | ಇ.ಐ.ಡಿ. ಪ್ಯಾರಿ (ಭಾರತ) ಲಿಮಿಟೆಡ್, ಹಳಿಯಾಳ, ಉತ್ತರ ಕನ್ನಡ ಜಿಲ್ಲೆ |
| 29 | ಜಿಎಂ ಶುಗರ್ ಅಂಡ್ ಎನರ್ಜಿ ಲಿ., ಘಟಕ-2, ಕಿರಿಗೇರಿ, ಚಟ್ನಳ್ಳಿ ಗ್ರಾಮ, ರಟ್ಟಿಹಳ್ಳಿ ತಾಲ್ಲೂಕು, ಹಾವೇರಿ ಜಿಲ್ಲೆ |
| 30 | ಜೆಮ್ ಶುಗರ್ಸ್ ಲಿಮಿಟೆಡ್, ಕುಂದರಗಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ- 587204 |
| 31 | ಗೋದಾವರಿ ಶುಗರ್ಸ್ ಲಿಮಿಟೆಡ್, ಸಮೀರವಾಡಿ, ಮುಧೋಳ ತಾಲ್ಲೂಕು, ಬಾಗಲಕೋಟೆ ಜಿಲ್ಲೆ-587316 |
| 32 | ಗೋಕಾಕ್ ಶುಗರ್ಸ್ ಲಿಮಿಟೆಡ್, ಕೊಳವಿ, ಗೋಕಾಕ್ ತಾಲ್ಲೂಕು, ಬೆಳಗಾವಿ ಜಿಲ್ಲೆ |
| 33 | ಹರ್ಷ ಶುಗರ್ಸ್ ಲಿಮಿಟೆಡ್, ಹನುಮಾನ್ ನಗರ, ಬೆಳಗಾವಿ ಜಿಲ್ಲೆ |
| 34 | ಇಂಡಿಯನ್ ಕೇನ್ ಪವರ್ ಲಿಮಿಟೆಡ್, ಉತ್ತೂರು, ಮುಧೋಳ ತಾಲ್ಲೂಕು, ಬಾಗಲಕೋಟೆ ಜಿಲ್ಲೆ -587313 |
| 35 | ಇಂಡಿಯನ್ ಕೇನ್ ಪವರ್ ಲಿಮಿಟೆಡ್, ಅಳಗವಾಡಿ, ಬೀರೇಶ್ವರ ಶುಗರ್ಸ್, ಅಳಗವಾಡಿ, ರಾಯಬಾಗ ತಾಲ್ಲೂಕು,, ಬೆಳಗಾವಿ ಜಿಲ್ಲೆ |
| 36 | ಇಂಡಿಯನ್ ಶುಗರ್ ಮ್ಯಾನುಫ್ಯಾಕ್ಚರಿಂಗ್ ಕಂ. ಲಿ., ಹಾವಿನಾಳ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ -586205 |
| 37 | ಜಮಖಂಡಿ ಶುಗರ್ಸ್ ಲಿಮಿಟೆಡ್, ಹಿರೇಪಡಸಲಗಿ, ಜಮಖಂಡಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ- 587302 |
| 38 | ಜಮಖಂಡಿ ಶುಗರ್ಸ್ ಲಿಮಿಟೆಡ್,(ಘಟಕ-2) ನಾದ್ ಕೆ.ಡಿ. ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ |
| 39 | ಕೆಪಿಆರ್ ಶುಗರ್ ಮಿಲ್ಸ್ ಪ್ರೈ. ಲಿ., ಅಲಮೇಲು ಗ್ರಾಮ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ- 586202 |
| 40 | ಕೆಪಿಆರ್ ಶುಗರ್ ಮಿಲ್ಸ್ ಪ್ರೈ. ಲಿ., ಚಿನ್ನಮಗೇರಿ ಗ್ರಾಮ, ಅಫಜಲಪುರ ತಾಲ್ಲೂಕು,ಕಲ್ಬುರ್ಗಿ ಜಿಲ್ಲೆ |
| 41 | ಸಾಯಿ ಬಸವ ಶುಗರ್ಸ್ ಲಿ., ಮಲಘಾಣ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ |
| 42 | ಮೆಲ್ಬೊ ಶುಗರ್ಸ್ ಪ್ರೈ. ಲಿ., ಶಿರೂರು ಗ್ರಾಮ, ಬಾಗಲಕೋಟೆತಾಲ್ಲೂಕು, ಮತ್ತು ಜಿಲ್ಲೆ |
| 43 | ಎಂ ಆರ್ ಎನ್ ಶುಗರ್ಸ್ ಲಿಮಿಟೆಡ್, ಕಲ್ಲಾಪುರ (ಎಸ್ ಕೆ), ಬಾಗಲಕೋಟೆ ಜಿಲ್ಲೆ |
| 44 | ನಿರಾಣಿ ಶುಗರ್ಸ್ ಲಿಮಿಟೆಡ್, ಮುಧೋಳ, ಮುಧೋಳ ತಾಲ್ಲೂಕು, ಬಾಗಲಕೋಟೆ ಜಿಲ್ಲೆ -587313 |
| 45 | ಅರಿಹಂತ್ ಶುಗರ್ಸ್ ಲಿಮಿಟೆಡ್, ಜೈನಾಪುರ, ಚಿಕ್ಕೋಡಿ, ಬೆಳಗಾವಿ ಜಿಲ್ಲೆ |
| 46 | ಪ್ರಭುಲಿಂಗೇಶ್ವರ ಶುಗರ್ಸ್ ಲಿಮಿಟೆಡ್, ಸಿದ್ದಾಪುರ, ಜಮಖಂಡಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ-587301 |
| 47 | ರೇಣುಕಾ ಶುಗರ್ಸ್ ಲಿ., ಬುರಲಟ್ಟಿ, ಅಥಣಿ ತಾಲ್ಲೂಕು, ಬೆಳಗಾವಿ ಜಿಲ್ಲೆ |
| 48 | ರೇಣುಕಾ ಶುಗರ್ಸ್ ಲಿ., ಹವಳಗಾ, ಅಫಜಲಪುರ ತಾಲ್ಲೂಕು, ಕಲ್ಬುರ್ಗಿ ಜಿಲ್ಲೆ |
| 49 | ರೇಣುಕಾ ಶುಗರ್ ಲಿಮಿಟೆಡ್, ಮನೋಳಿ, ಸೌದತ್ತಿ ತಾಲ್ಲೂಕು, ಬೆಳಗಾವಿ ಜಿಲ್ಲೆ -591117 |
| 50 | ಸತೀಶ್ ಶುಗರ್ಸ್ ಲಿ., ಹುಣಶ್ಯಾಳ, ಗೋಕಾಕ್ ತಾಲ್ಲೂಕು, ಬೆಳಗಾವಿ ಜಿಲ್ಲೆ-591307 |
| 51 | ಸಾಯಿಪ್ರಿಯಾ ಶುಗರ್ಸ್ ಲಿಮಿಟೆಡ್, ಹಿಪ್ಪರಗಿ-ಮೈಗೂರು, ಜಮಖಂಡಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ |
| 52 | ಶಿರಗುಪ್ಪಿ ಶುಗರ್ ವರ್ಕ್ಸ್ ಲಿಮಿಟೆಡ್, ಕಾಗವಾಡ, ಅಥಣಿ ತಾಲ್ಲೂಕು, ಬೆಳಗಾವಿ ಜಿಲ್ಲೆ-591223 |
| 53 | ಶಿವಶಕ್ತಿ ಶುಗರ್ಸ್ ಲಿಮಿಟೆಡ್, ಸೌಂದತ್ತಿ, ರಾಯಬಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ |
| 54 | ಶ್ರೀ ಬಸವೇಶ್ವರ ಶುಗರ್ಸ್ ಲಿಮಿಟೆಡ್, ಕಾರಜೋಳ, ವಿಜಯಪುರ ಜಿಲ್ಲೆ |
| 55 | ಸೌಭಾಗ್ಯಲಕ್ಷ್ಮಿ ಶುಗರ್ಸ್ ಲಿಮಿಟೆಡ್, ಹಿರೇನಂದಿ, ಗೋಕಾಕ್ ತಾಲ್ಲೂಕು, ಬೆಳಗಾವಿ ಜಿಲ್ಲೆ |
| 56 | ಉಗಾರ್ ಶುಗರ್ ವರ್ಕ್ಸ್ ಲಿಮಿಟೆಡ್, ನಾಗರಾಳ, ಜೇವರ್ಗಿ ತಾಲ್ಲೂಕು, ಕಲ್ಬುರ್ಗಿ ಜಿಲ್ಲೆ-585325 |
| 57 | ಉಗಾರ್ ಶುಗರ್ ವರ್ಕ್ಸ್ ಲಿಮಿಟೆಡ್, ಉಗಾರ್ ಖುರ್ದ್, ಅಥಣಿ ತಾಲ್ಲೂಕು, ಬೆಳಗಾವಿ ಜಿಲ್ಲೆ -591316 |

| | |
|---|---|
| 58 | ವೆಂಕಟೇಶ್ವರ ಪವರ್ ಪ್ರಾಜೆಕ್ಟ್ ಲಿಮಿಟೆಡ್, ಬೇಡ್ಕಿಹಾಳ್, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ-591214 |
| 59 | ವಿಐಎನ್‌ಪಿ ಡಿಸ್ಟಿಲರೀಸ್ ಮತ್ತು ಶುಗರ್ಸ್ ಪ್ರೈ. ಲಿ., ಕೋಣನಕೆರೆ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ |
| 60 | ವಿಶ್ವರಾಜ್ ಶುಗರ್ ಇಂಡಸ್ಟ್ರೀಸ್ ಲಿಮಿಟೆಡ್, ಬೆಲ್ಲದಬಾಗೇವಾಡಿ, ಹುಕ್ಕೇರಿ ತಾಲ್ಲೂಕು. ಬೆಳಗಾವಿ ಜಿಲ್ಲೆ-591305 |
| 61 | ಬಾದಾಮಿ ಶುಗರ್ಸ್ ಲಿಮಿಟೆಡ್, ಮುಷ್ಠಿಗೇರಿ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ |
| 62 | ಭವಾನಿ ಶುಗರ್ಸ್ ಲಿಮಿಟೆಡ್, ಬರೂರು, ಬೀದರ್ ತಾಲ್ಲೂಕು& ಜಿಲ್ಲೆ-585257 |
| 63 | ಕೇದಾರನಾಥ್ ಶುಗರ್ಸ್ ಲಿಮಿಟೆಡ್, ಕೆರಕಲಮಟ್ಟಿ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ-587206 |
| 64 | ಶಿವಸಾಗರ್ ಶುಗರ್ಸ್ & ಆಗ್ರೋ ಪ್ರಾಡಕ್ಟ್ಸ್ ಲಿಮಿಟೆಡ್, ಉದಪುಡಿ, ರಾಮದುರ್ಗ ತಾಲ್ಲೂಕು, ಬೆಳಗಾವಿ ಜಿಲ್ಲೆ |
| 65 | ಎನ್ ಎಸ್ ಎಲ್ (ತುಂಗಭದ್ರಾ) ಶುಗರ್ಸ್ ಲಿಮಿಟೆಡ್, ದೇಶನೂರು, ಸಿರಗುಪ್ಪ ತಾಲ್ಲೂಕು, ಬಳ್ಳಾರಿ ಜಿಲ್ಲೆ -583140 |
| 66 | ಸಂಗಮನಾಥ ಶುಗರ್ಸ್ ಲಿ., ಯರಗಲ್ ಬಿ.ಕೆ., ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ |
| 67 | ಶ್ರೀಬಸವೇಶ್ವರಶುಗರ್ಸ್‌ಲಿಮಿಟೆಡ್, ಬಳ್ಳಿಗೇರಿ, ಅಥಣಿ ತಾಲ್ಲೂಕು, ಬೆಳಗಾವಿ ಜಿಲ್ಲೆ |
| 68 | ಇಂಡಿಯನ್ ಕೇನ್ ಪವರ್ ಲಿ. ಘಟಕ: ಧ್ಯಾನಯೋಗಿ ಶ್ರೀ ಶಿವಕುಮಾರಸ್ವಾಮಿಜಿ ಶುಗರ್ಸ್ ಲಿಮಿಟೆಡ್, ಹಿರೇಬೇಮನೂರು ಗ್ರಾಮ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ |
| 69 | ಇನಾಂದಾರ್ ಶುಗರ್ಸ್ ಲಿಮಿಟೆಡ್, ಸರ್ವೇ ನಂ.39 & 40, ಹಿರೇಕೊಪ್ಪ, ಮಾರಕುಂಬಿ-591119 ಸವದತ್ತಿ ತಾಲ್ಲೂಕು, ಬೆಳಗಾವಿ ಜಿಲ್ಲೆ |

## ಸ್ಥಗಿತಗೊಂಡಿರುವ ಸಕ್ಕರೆ ಕಾರ್ಖಾನೆಗಳು

| | |
|---|---|
| | **ಜಂಟಿ ವಲಯ: ಸಮಾಪನೆ** |
| 1 | ಗಂಗಾವತಿ ಶುಗರ್ಸ್, ಪ್ರಗತಿ ನಗರ, ಗಂಗಾವತಿ ತಾಲ್ಲೂಕು, ಕೊಪ್ಪಳ ಜಿಲ್ಲೆ- 583268 |
| | **ಸಹಕಾರಿ ವಲಯ: (ಸ್ಥಗಿತ)** |
| 2 | ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ನಿ.ಹಳ್ಳಿಖೇಡ್, ಹುಮನಾಬಾದ್ ತಾಲ್ಲೂಕು, ಬೀದರ್ ಜಿಲ್ಲೆ |
| 3 | ರೈತರ ಸಹಕಾರಿ ಸಕ್ಕರೆ ಕಾರ್ಖಾನೆ ನಿ.ರನ್ನನಗರ, ಮುಧೋಳ ತಾಲ್ಲೂಕು, ಬಾಗಲಕೋಟೆ ಜಿಲ್ಲೆ |
| | **ಸಹಕಾರಿ (ಸಮಾಪನೆ)** |
| 4 | ಬಸವೇಶ್ವರ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಕಿರಿಗೇರಿ, ಹಿರೇಕೆರೂರು ತಾಲ್ಲೂಕು,, ಹಾವೇರಿ ಜಿಲ್ಲೆ |
| | **ಖಾಸಗಿ ವಲಯ:** |
| 5 | ಸಿದ್ದಸಿರಿ ಸೌಹಾರ್ದ ಸಹಕಾರಿ ನಿಯಮಿತ, ಚಿಂಚೋಳಿ ಗ್ರಾಮ ಮತ್ತು ತಾಲ್ಲೂಕು, ಕಲಬುರ್ಗಿ ಜಿಲ್ಲೆ |
| 6 | ಸಾವರಿನ್ ಇಂಡಸ್ಟ್ರೀಸ್ ಲಿಮಿಟೆಡ್, ತೇರದಾಳ ಗ್ರಾಮ, ಜಮಖಂಡಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ |
| 7 | ಸುಂದರಿ ಶುಗರ್ಸ್ ಲಿಮಿಟೆಡ್ (ಕಂಪ್ಲಿ ಸಹಕಾರಿ ಸಕ್ಕರೆ ಕಾರ್ಖಾನೆ ನಿ.), ಕಂಪ್ಲಿ, ಬಳ್ಳಾರಿ ಜಿಲ್ಲೆ- 583133 |

ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ
ಸಕ್ಕರೆ ನಿರ್ದೇಶಕರು

914

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

ಅನುಬಂಧ-2

| ಭಾಗ-III | ಬೆಂಗಳೂರು, ಗುರುವಾರ, ಜನವರಿ ೧೦, ೨೦೧೯ (ಪುಷ್ಯ ೨೦, ಶಕ ವರ್ಷ ೧೯೪೦) | ನಂ. ೨೭ |
|---|---|---|
| Part-III | Bengaluru, Thursday, January 10, 2019 (Pushya 20, Shaka Varsha 1940) | No. 27 |


ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವಾಲಯ

## ಅಧಿಸೂಚನೆ

ಸಂಖ್ಯೆ: ಪಿಡಿ 75 ಯೋಪರ 2018, ಬೆಂಗಳೂರು, ದಿನಾಂಕ: 10.01.2019

ಉತ್ತರ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಯನ್ನು ತೀವ್ರಗೊಳಿಸಲು ಹಾಗೂ ಆ ಭಾಗದ ಸಾರ್ವಜನಿಕರಿಗೆ ರಾಜ್ಯದ ಆಡಳಿತವು ಹತ್ತಿರವಾಗಲು ಕರ್ನಾಟಕ ಸರ್ಕಾರದ ಕಛೇರಿಗಳನ್ನು ಈ ಕೆಳಕಂಡ ಪಟ್ಟಿಯಲ್ಲಿ ನಮೂದಿಸಿರುವಂತೆ ಉತ್ತರ ಕರ್ನಾಟಕದ ವಿವಿಧ ಸ್ಥಳಗಳಿಗೆ ವರ್ಗಾಯಿಸಿ ಆದೇಶಿಸಲಾಗಿದೆ.

| ಕ್ರಮ ಸಂಖ್ಯೆ | ಕಚೇರಿ/ನಿಗಮ/ಆಯೋಗ | ಆಡಳಿತಾತ್ಮಕ ಇಲಾಖೆ | ವರ್ಗಾಯಿಸಿರುವ ಸ್ಥಳ |
|---|---|---|---|
| 1. | ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಬೆಂಗಳೂರು | ಜಲಸಂಪನ್ಮೂಲ ಇಲಾಖೆ | ಆಲಮಟ್ಟಿ |
| 2. | ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು. | ಜಲಸಂಪನ್ಮೂಲ ಇಲಾಖೆ | ದಾವಣಗೆರೆ |
| 3. | ಕರ್ನಾಟಕ ರಾಜ್ಯ ಜವಳಿ ಮೂಲ ಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು (ವಿದ್ಯುತ್ ಮಗ್ಗಗಳ ಅಭಿವೃದ್ಧಿ ನಿಗಮ ನಿಯಮಿತ) | ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ | ಬೆಳಗಾವಿ |
| 4. | ಸಕ್ಕರೆ ನಿರ್ದೇಶಕರು ಮತ್ತು ಕಬ್ಬು ಅಭಿವೃದ್ಧಿ ಆಯುಕ್ತರ ಕೇಂದ್ರ ಕಚೇರಿ, ಬೆಂಗಳೂರು. | ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ | ಬೆಳಗಾವಿ |
| 5. | ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು ಇದನ್ನು ವಿಭಜಿಸಿ ಉತ್ತರ ಕರ್ನಾಟಕದಲ್ಲಿ ಪ್ರತ್ಯೇಕವಾಗಿ ಸ್ಥಾಪಿಸುವ ಮಂಡಳಿ. | ನಗರಾಭಿವೃದ್ಧಿ ಇಲಾಖೆ | ಹುಬ್ಬಳ್ಳಿ |
| 6. | ನಿರ್ದೇಶಕರು, ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು. | ಪ್ರವಾಸೋದ್ಯಮ ಇಲಾಖೆ | ಹಂಪಿ |
| 7. | ಬೆಂಗಳೂರಿನಲ್ಲಿರುವ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಸದಸ್ಯರ ಪೈಕಿ ಒಬ್ಬ ಸದಸ್ಯರ ಕಚೇರಿ. | ಕಾನೂನು ಇಲಾಖೆ | ಧಾರವಾಡ |

Scanned with OKEN Scanner

| ಕ್ರಮ ಸಂಖ್ಯೆ | ಕಚೇರಿ/ನಿಗಮ/ಆಯೋಗ | ಆಡಳಿತಾತ್ಮಕ ಇಲಾಖೆ | ವರ್ಗಾಯಿಸಿರುವ ಸ್ಥಳ |
|---|---|---|---|
| 8. | ಬೆಂಗಳೂರಿನಲ್ಲಿರುವ ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ಆಯುಕ್ತರುಗಳ ಪೈಕಿ ಎರಡು ಮಾಹಿತಿ ಆಯುಕ್ತರ ಕಚೇರಿಗಳು. | ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಜನಸ್ಪಂದನ) | ಒಂದು ಪೀಠ ಕಲಬುರಗಿಗೆ ಒಂದು ಪೀಠ ಬೆಳಗಾವಿಗೆ |
| 9. | ಕರ್ನಾಟಕ ಲೋಕಾಯುಕ್ತದಲ್ಲಿರುವ ಎರಡು ಉಪ ಲೋಕಾಯುಕ್ತ ಕಚೇರಿಗಳ ಪೈಕಿ ಒಂದು ಉಪ ಲೋಕಾಯುಕ್ತ ಕಛೇರಿ. | ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಜಾಗೃತ ವಿಭಾಗ) | ಧಾರವಾಡ |

ಈ ಅಧಿಸೂಚನೆಯನ್ನು ಕರ್ನಾಟಕ ಸರ್ಕಾರ (ವ್ಯವಹಾರ ನಿರ್ವಹಣೆ) ನಿಯಮಗಳು, 1977ರ ಮೊದಲನೇ ಅನುಸೂಚಿಯ ವಿಷಯ ಸಂಖ್ಯೆ 28ರ ಅನುಸಾರ ಸಚಿವ ಸಂಪುಟವು ಕೈಗೊಂಡಿರುವ ನಿರ್ಣಯದ ಅನುಸಾರ ಹೊರಡಿಸಲಾಗಿದೆ.

ಈ ಕಛೇರಿಗಳ ಸ್ಥಳಾಂತರವನ್ನು ದಿನಾಂಕ: 01.04.2019 ರಂದು ಜಾರಿಗೆ ತರತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ರಫೀ ಅಹಮದ್.ಎಂ.ಎಸ್
ಸರ್ಕಾರದ ಉಪ ಕಾರ್ಯದರ್ಶಿ,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

Scanned with OKEN Scanner

914

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

| ಸಂಪುಟ –೧೫೯<br>Volume - 159 | ಬೆಂಗಳೂರು, ಸೋಮವಾರ, ೨೫, ನವೆಂಬರ್, ೨೦೨೪(ಮಾರ್ಗಶಿರ, ೦೪, ಶಕವರ್ಷ, ೧೯೪೬)<br>BENGALURU, MONDAY, 25, NOVEMBER, 2024(MARGASHIRA, 04, SHAKAVARSHA, 1946) | ಸಂಚಿಕೆ ೨೨೬<br>Issue 226 |
|---|---|---|

## ಭಾಗ ೪ಎ

### ರಾಜ್ಯದ ವಿಧೇಯಕಗಳ ಮತ್ತು ಅವುಗಳ ಮೇಲೆ ಪರಿಶೀಲನಾ ಸಮಿತಿಯ ವರದಿಗಳು, ರಾಜ್ಯದ ಅಧಿನಿಯಮಗಳು ಮತ್ತು ಆಧ್ಯಾದೇಶಗಳು, ಕೇಂದ್ರದ ಮತ್ತು ರಾಜ್ಯದ ಶಾಸನಗಳ ಮೇರೆಗೆ ರಾಜ್ಯ ಸರ್ಕಾರವು ಹೊರಡಿಸಿದ ಸಾಮಾನ್ಯ ಶಾಸನಬದ್ಧ ನಿಯಮಗಳು ಮತ್ತು ರಾಜ್ಯಾಂಗದ ಮೇರೆಗೆ ರಾಜ್ಯಪಾಲರು ಮಾಡಿದ ನಿಯಮಗಳು ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯವು ಮಾಡಿದ ನಿಯಮಗಳು

<u>ಕರ್ನಾಟಕ ಸರ್ಕಾರ</u>

**ಸಂಖ್ಯೆ:** ಸಿಐ 77 ಸಿಓಎಫ್ 2019

ಕರ್ನಾಟಕ ಸರ್ಕಾರ ಸಚಿವಾಲಯ
ವಿಕಾಸಸೌಧ
ಬೆಂಗಳೂರು, ದಿನಾಂಕ:20.11.2024

<u>ಅಧಿಸೂಚನೆ</u>

1. ಸರ್ಕಾರದ ಅಧಿಸೂಚನೆ ಸಂಖ್ಯೆ:ಪಿಡಿ 75 ಯೋಪರ 2018, ದಿನಾಂಕ:10.01.2019ರಲ್ಲಿ ಅಧಿಸೂಚಿಸಿದಂತೆ ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ:ಪಿಡಿ 75 ಯೋಪರ 2018, ದಿನಾಂಕ: 23.09.2019ರಲ್ಲಿನ ಸೂಚನೆಯನ್ವಯ ದಿನಾಂಕ:01.10.2021ರಿಂದ ಜಾರಿಗೆ ಬರುವಂತೆ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಕೇಂದ್ರ ಕಛೇರಿಯನ್ನು ಬೆಂಗಳೂರಿನಿಂದ ಬೆಳಗಾವಿಯ ಸುವರ್ಣಸೌಧಕ್ಕೆ ಸ್ಥಳಾಂತರಿಸಲು ಮತ್ತು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಕಛೇರಿಯನ್ನು ಪೂರ್ಣ ಪ್ರಮಾಣದಲ್ಲಿ ಬೆಳಗಾವಿಯ ಸುವರ್ಣಸೌಧಕ್ಕೆ ಸ್ಥಳಾಂತರಿಸುವವರೆಗೆ ತಾತ್ಕಾಲಿಕವಾಗಿ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಕಛೇರಿಯನ್ನು ಬೆಳಗಾವಿಯ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಲ್ಲಿ ಪ್ರಾರಂಭಿಸಲು ಸರ್ಕಾರದ ಆದೇಶ ಸಂಖ್ಯೆ: ಸಿಐ 77 ಸಿಓಎಫ್ 2019, ದಿನಾಂಕ:30.09.2021ರಲ್ಲಿ ಆದೇಶಿಸಲಾಗಿತ್ತು.
2. ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ ಬೆಳಗಾವಿ ಇವರ ಪರಿಷ್ಕೃತ ಆದೇಶ ಸಂಖ್ಯೆ: ಕಂಶಾ/ಲೋಇ/ವಿವ-5/2020-21, ದಿನಾಂಕ:20.01.2023ರಲ್ಲಿ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ರಾಜ್ಯಮಟ್ಟದ ಕಚೇರಿಗೆ ಬೆಳಗಾವಿಯ ಸುವರ್ಣಸೌಧದ ಕೊಠಡಿ ಸಂಖ್ಯೆ: 204, 204 ಎ, 205, 206, ಮತ್ತು 206 ಎ' ಗಳನ್ನು ಹಂಚಿಕೆ ಮಾಡಲಾಗಿರುತ್ತದೆ.
3. ಆದ್ದರಿಂದ, ಪ್ರಸ್ತುತ ಬೆಳಗಾವಿಯ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಲ್ಲಿ ತಾತ್ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿರುವ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಕೇಂದ್ರ ಕಚೇರಿಯನ್ನು ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಬೆಳಗಾವಿಯ ಸುವರ್ಣಸೌಧದ ಕೊಠಡಿ ಸಂಖ್ಯೆ: 204, 204 ಎ, 205, 206, 206 ಎ''ಗಳಿಗೆ ಸ್ಥಳಾಂತರ ಮಾಡಿ ಅಧಿಸೂಚಿಸಿದೆ.

**ಷರತ್ತುಗಳು:**

i. ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ ಬೆಳಗಾವಿ ಇವರ ಪರಿಷ್ಕೃತ ಆದೇಶ ಸಂಖ್ಯೆ: ಕಂಶಾ/ಲೋಇ/ವಿವ-5/2020-21, ದಿನಾಂಕ:20.01.2023ರಲ್ಲಿನ ಷರತ್ತುಗಳನ್ನು ಪಾಲಿಸತಕ್ಕದ್ದು.

ii. ಲೋಕೋಪಯೋಗಿ ಇಲಾಖೆಯ ಸಂಬಂಧಿಸಿದ ಪ್ರಾಧಿಕಾರವನ್ನು ಸಂಪರ್ಕಿಸಿ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಕೇಂದ್ರ ಕಚೇರಿಯನ್ನು ಬೆಳಗಾವಿಯ ಸುವರ್ಣಸೌಧದ ಕೊಠಡಿ ಸಂಖ್ಯೆ: 204, 204 ಎ, 205, 206 ಮತ್ತು 206 ಎ' ಗಳಿಗೆ ಸ್ಥಳಾಂತರಿಸುವ ಕಾರ್ಯವನ್ನು ಕೈಗೊಂಡು ಸರ್ಕಾರಕ್ಕೆ ಅನುಪಾಲನಾ ವರದಿಯನ್ನು ಸಲ್ಲಿಸತಕ್ಕದ್ದು.

iii. ಬೆಳಗಾವಿಯಲ್ಲಿ ಜರುಗುವ ಕರ್ನಾಟಕ ವಿಧಾನ ಮಂಡಲದ ಅಧಿವೇಶನದ ಸಮಯದಲ್ಲಿ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಕೇಂದ್ರ ಕಚೇರಿಯ ನಿರ್ವಹಣೆಯನ್ನು ಬೆಳಗಾವಿಯ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಲ್ಲಿ ನಿರ್ವಹಿಸುವುದು.

iv. ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ರಾಜ್ಯಮಟ್ಟದ ಕಚೇರಿಯ ವಿಳಾಸವು "ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು" ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯ, ಕೊಠಡಿ ಸಂಖ್ಯೆ 206, ಎರಡನೇ.ಮಹಡಿ, ಸುವರ್ಣಸೌಧ, ಬೆಳಗಾವಿ-590020" ಎಂದು ಆಗಿರತಕ್ಕದ್ದು.

v. ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಕಚೇರಿ ದಾಖಲೆಗಳಲ್ಲಿ ಮತ್ತು ಕೇಂದ್ರ ಸರ್ಕಾರದೊಂದಿಗೆ / ಇತರೆ ರಾಜ್ಯ ಸರ್ಕಾರಗಳೊಂದಿಗೆ / ಕರ್ನಾಟಕ ಸರ್ಕಾರದ ಇಲಾಖೆಗಳೊಂದಿಗೆ / ನಿಗಮಗಳು / ಮಂಡಳಿಗಳು / ಸಂಸ್ಥೆಗಳು / ಸ್ವಾಯತ್ತ ಸಂಸ್ಥೆಗಳು/ ಸ್ಥಳೀಯ ಸಂಸ್ಥೆಗಳು /ಪ್ರಾಧಿಕಾರ ಗಳೊಂದಿಗೆ ನಡೆಸುವ ಎಲ್ಲಾ ಪತ್ರ ವ್ಯವಹಾರಗಳಲ್ಲಿ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ರಾಜ್ಯಮಟ್ಟದ ಕಚೇರಿಯ ವಿಳಾಸವನ್ನು ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು" ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯ, ಕೊಠಡಿ ಸಂಖ್ಯೆ 206, ಎರಡನೇ ಮಹಡಿ, ಸುವರ್ಣಸೌಧ, ಬೆಳಗಾವಿ ಸುವರ್ಣಸೌಧ, ಬೆಳಗಾವಿ-590020" ಎಂದು ನಮೂದಿಸತಕ್ಕದ್ದು.

vi. ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ರಾಜ್ಯಮಟ್ಟದ ಕಚೇರಿಯ ಸ್ಥಳಾಂತರದ ಮಾಹಿತಿಯನ್ನು ಸಾರ್ವಜನಿಕರಿಗೆ / ರೈತರಿಗೆ / ಸಕ್ಕರೆ ಕಾರ್ಖಾನೆಗಳಿಗೆ ತಿಳಿಸುವ ಸಂಬಂಧ ವ್ಯಾಪಕ ಪ್ರಚಾರ ನೀಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಶಾಂತಾರಾಮ)**
ಸರ್ಕಾರದ ಅಧೀನ ಕಾರ್ಯದರ್ಶಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ(ಸಕ್ಕರೆ)

**PR-1551**

## GOVERNMENT OF KARNATAKA

RC-CFS0ADMN/313/2024-RC
E- 1341149

Karnataka Government Secretariat
Multi Storied Building
Bengaluru 560-001,
Date:09.10.2024

## FINAL NOTIFICATION

Whereas the draft of the Notification No. **RC-CFS0ADMN/313/2024-RC, E- 1341149 Date 01.03.2024** regarding altering the limits of **BOPPALAPURA village of KUDLIGI Taluk and VIJAYANAGARA District** and constituting a new revenue sub village called **as SANIHALLI** sub village was published as required by section 6 of the Karnataka Land Revenue Act, 1964 (Karnataka act No.12 of 1964) in the Karnataka **Gazette dated:16.07.2024** inviting objections or suggestions from all the persons likely to be affected thereby within thirty days from the date of its publication in the Official Gazette addressed to the Deputy Commissioner **VIJAYANAGARA** district.